**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಸಿ.ಟಿ.ರವಿ ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ**

******

**ಪ್ರಶ್ನೆ:** ರಾಜ್ಯದ ವಿವಿಧೆಡೆ ಹಸುಗಳ ಹತ್ಯೆ, ಕತ್ತು ಕೊಯ್ಯುವುದು, ಕೆಚ್ಚಲು ಕತ್ತರಿಸುವಂತ ಅಮಾನುಷ ಕೃತ್ಯಗಳು ಮುಂದುವರಿದಿದ್ದು, ಇದೀಗ ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ತಾಲ್ಲೂಕಿನ ಅರಳಸಂದ್ರ ಗ್ರಾಮದಲ್ಲಿ ಎರಡು ಹಳ್ಳಿಕಾರ ನಾಟಿ ಹೋರಿಗಳ ಕತ್ತು ಕೊಯ್ದಿರುವ ದುಷ್ಕೃತ್ಯ ಬೆಳಕಿಗೆ ಬಂದಿದೆ. ಬೆಂಗಳೂರು-ತುಮಕೂರು ರಾಷ್ಟ್ರೀಯ ಹೆದ್ದಾರಿ 48 ರಿಂದ 2 ಕಿಲೋ ಮೀಟರ್ ದೂರದ ಕುಮುದ್ವತಿ ನದಿಗೆ ಅಡ್ಡಲಾಗಿ ಅರಳಸಂದ್ರದ ಬಳಿ ನಿರ್ಮಿಸಿರುವ ಸೇತುವೆಯ ಮೇಲೆ ಕತ್ತು ಕೊಯ್ದ ಸ್ಥಿತಿಯಲ್ಲಿ ಎರಡು ಹೋರಿಗಳು ಪತ್ತೆಯಾಗಿದೆ. ಸ್ಥಳದಲ್ಲಿ ಯಾವುದೇ ರಕ್ತದ ಕಲೆಗಳು ಇಲ್ಲದಿರುವುದರನ್ನು ಗಮನಿಸಿದ್ದಲ್ಲಿ, ಬೇರೆ ಕಡೆ ಕತ್ತು ಕೊಯ್ದು ಈ ಸ್ಥಳದಲ್ಲಿ ಎಸೆದು ಹೋಗಿರುವುದು ಖಚಿತವಾಗಿದೆ. ಇದೇ ಸ್ಥಳದಲ್ಲಿ ಈ ಹಿಂದೆಯೂ ಸಹ ಸತ್ತ ಹಸುಗಳನ್ನು ಎಸೆದು ಹೋಗಿದ್ದ ಘಟನೆ ನಡೆದಿದೆ. ಈ ಹತ್ಯೆಗಳು ಅಕ್ರಮವಾಗಿ ಗೋವು ಸಾಗಾಣೆ ಮಾಡುವವರ ಕೃತ್ಯವೇ ಆಗಿದೆ.

ರಾಜ್ಯದಲ್ಲಿ ಪದೇ ಪದೇ ಈ ರೀತಿ ಹಸುಗಳ ಮೇಲೆ ವಿಕೃತಿ ಮೆರೆಯುವ ಪ್ರಕರಣಗಳು ನಡೆಯುತ್ತಲೇ ಇದೆ. ಬೆಂಗಳೂರು, ಚಿಕ್ಕಮಗಳೂರಿನಲ್ಲಿ ಹಸುವಿನ ಕೆಚ್ಚಲು ಕೊಯ್ದ ಪ್ರಕರಣಗಳು ಮಾಸುವ ಮುನ್ನವೇ ಮತ್ತೆ ಈ ಪ್ರಕರಣ ನಡೆದಿರುವುದು ಬಹುಸಂಖ್ಯಾತ ಹಿಂದೂಗಳ ಭಾವನೆಯನ್ನು ಕೆರಳಿಸುವ ಹುನ್ನಾರ ಆಗಿದೆ. ರಾಜ್ಯ ಸರ್ಕಾರ ಈ ರೀತಿ ಗೋವುಗಳ ಮೇಲೆ ವಿಕೃತಿ ಮೆರೆಯುವವರನ್ನು ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂಬುದರ ಕುರಿತು ಪ್ರಸ್ತಾಪಿಸಿರುತ್ತಾರೆ.

**ಉತ್ತರ:** ದಿನಾಂಕ 11-08-2025 ರಂದು ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ತಾಲ್ಲೂಕು, ಅರಳಸಂದ್ರ ಗ್ರಾಮದಲ್ಲಿ ಬೆಳಗ್ಗೆ 8-25 ಗಂಟೆಗೆ ಆನಂದ ನಗರದಿಂದ ಗೋವಿಂದಪುರಕ್ಕೆ ಸಂಪರ್ಕಿಸುವ ನಡುವೆ ಇರುವ ಸೇತುವೆಯ ಬಳಿ ಹಳ್ಳೀಕಾರ್ ಥಳಿಯ 02 ನಾಟಿ ಹೋರಿಗಳ ಕತ್ತು ಕೊಯ್ದ ಸ್ಥಿತಿಯಲ್ಲಿ ಬಿದ್ದಿರುವ ಬಗ್ಗೆ ಪೊಲೀಸರಿಗೆ ಮಾಹಿತಿ ಬಂದಿದ್ದು, ಕೂಡಲೇ ನೆಲಮಂಗಲ ಗ್ರಾಮಾಂತರ ಠಾಣಾ ಪೊಲೀಸರು ಸ್ಥಳಕ್ಕೆ ತೆರಳಿ ಸ್ಥಳ ಪರಿಶೀಲನೆ ನಡೆಸಿ ಬೆಳಿಗ್ಗೆ 9-30 ಗಂಟೆಗೆ ಪೊಲೀಸ್ ಠಾಣಾ ಮೊಕದ್ದಮೆ ಸಂಖ್ಯೆ 286/2025 ಕಲಂ. 4 & 5 Karnataka Prevention of Cow Slaughter & Cattle Prevention Act 2020 & u/s 177-192(A) Indian Motor Vehicles Act 1988 ರೀತ್ಯಾ ಪ್ರಕರಣ ದಾಖಲಾಗಿರುತ್ತದೆ.

ಈ ಪ್ರಕರಣದ ಪತ್ತೆಗಾಗಿ 02 ತನಿಖಾ ತಂಡಗಳನ್ನು ರಚಿಸಲಾಗಿದ್ದು, ವಾಹನ ಸಾಗಾಟ ಮಾಡಿದ ಅಪರಿಚಿತ ವಾಹನ ಮತ್ತು ಆರೋಪಿಗಳ ಪತ್ತೆಗೆ ಶ್ರಮಿಸಲಾಗುತ್ತಿದೆ ಹಾಗೂ ಸ್ಥಳದಲ್ಲಿ ಲಭ್ಯವಿರುವ ಸಿಸಿ ಕ್ಯಾಮೆರಾ ದೃಶ್ಯಾವಳಿಗಳನ್ನು ಪಡೆಯಲಾಗಿರುತ್ತದೆ. ಮತ್ತು ಹೆಚ್ಚಿನ ಮಾಹಿತಿಗಾಗಿ ಬಾತ್ಮಿದಾರರನ್ನು ಸಂಪರ್ಕಿಸಲಾಗುತ್ತಿದೆ.

ಈ ಪ್ರಕರಣದ ಆರೋಪಿಗಳನ್ನು ಶೀಘ್ರವಾಗಿ ಪತ್ತೆಹಚ್ಚಲಾಗುವುದು.

**ಸಂಖ್ಯೆ: ಹೆಚ್‌ಡಿ 405 ಎಸ್‌ಎಸ್‌ಟಿ 2025**

ಜಿ.ಪರಮೇಶ್ವರ

**(ಡಾ: ಜಿ. ಪರಮೇಶ್ವರ)**
**ಗೃಹ ಸಚಿವರು**